**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–47)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ ಅಧಿನಿಯಮ, 2023 (2023ರ ಕರ್ನಾಟಕ ಅಧಿನಿಯಮ 28)ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ವಿಧೇಯಕ, 2023 (2023 ರ ಕರ್ನಾಟಕ ವಿಧೇಯಕ 28)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಹೊಸ ಅಧ್ಯಾಯ IV-ಎ ಸೇರ್ಪಡೆ.-** ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ ಅಧಿನಿಯಮ, 2023 (2023ರ ಕರ್ನಾಟಕ ಅಧಿನಿಯಮ 28)ರ ಅಧ್ಯಾಯ **IV**ರ ತರುವಾಯ ಈ ಮುಂದಿನ ಹೊಸ ಅಧ್ಯಾಯವನ್ನು ಸೇರಿಸತಕ್ಕದ್ದು ಎಂದರೆ:-

**"ಅಧ್ಯಾಯ IV-ಎ**

**ನ್ಯಾಯಲಯದ ಆದೇಶಗಳ ಅನುಪಾಲನೆ**

**28-A. ಗೊತ್ತುಪಡಿಸಿದ ಅಧಿಕಾರಿ.-** ಸರ್ಕಾರವು ಅಧಿಸೂಚನೆಯ ಮೂಲಕ ನ್ಯಾಯಾಲಯವು ಹೊರಡಿದ ಯಾವುದೇ ಆದೇಶದ ಜಾರಿ ಅಥವಾ ಅನುಪಾಲನೆಯ ಮೇಲ್ವಿಚಾರಣೆ ಮಾಡಲು ಒಬ್ಬ ಅಧಿಕಾರಿಯನ್ನು ಗೊತ್ತುಪಡಿಸಿದ ಅಧಿಕಾರಿಯನ್ನಾಗಿ ನೇಮಿಸತಕ್ಕದ್ದು.

**28-B. ನ್ಯಾಯಾಲಯ ಆದೇಶದ ಅನನುಪಾಲನೆ.-** (1) ಪ್ರತಿಯೊಂದು ಇಲಾಖೆಯು ಗೊತ್ತುಪಡಿಸಿದ ಅಧಿಕಾರಿಯ ನೆರವಿನೊಂದಿಗೆ ನಿರ್ದಿಷ್ಟಪಡಿಸಿದ ಸಮಯದೊಳಗಾಗಿ ಅನುಪಾಲನೆ ಮಾಡದಿರುವ ಮತ್ತು ಅಂಥ ಅವಧಿಯೊಳಗೆ ಅನುಪಾಲನೆ ಮಾಡಿರುವ ಆದೇಶಗಳ ಸಂಖ್ಯೆಯನ್ನು ಒಳಗೊಂಡ ಪಾಕ್ಷಿಕ (ಹದಿನೈದು ದಿನಗಳ) ವರದಿಯನ್ನು ಸಿದ್ಧಪಡಿಸತಕ್ಕದ್ದು.

(2) ಆದೇಶಗಳ ಅನನುಪಾಲನೆಗಾಗಿ, ಇಲಾಖೆಯ ಮುಖ್ಯಸ್ಥರ ಮುಂದೆ ಮಂಡಿಸಬೇಕಾದ ಪ್ರತಿಯೊಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಅನುಪಾಲನೆಯ ಮುಂದಿನ ಪ್ರಕ್ರಿಯೆಗೊಳಿಸುವ ಕುರಿತಾದ ಕಾರಣಗಳನ್ನು ನೀಡತಕ್ಕದ್ದು."

# ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ವಿಧೇಯಕ, 2023 (2023 ರ ಕರ್ನಾಟಕ ವಿಧೇಯಕ 28) ಈ ಮುಂದಿನವುಗಳಿಗಾಗಿ ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ,-

(i) ರಿಟ್ ಅರ್ಜಿ ಸಂಖ್ಯೆ. 2024ರ 11822 (ಜಿಇ-ಆರ್‌ಇಎಸ್-ಪಿಐಎಲ್)ನಲ್ಲಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ನೀಡಿದ ನಿರ್ದೇಶನಗಳನ್ನು ಅನುಷ್ಠಾನಗೊಳಿಸುವುದು;

(ii) ನ್ಯಾಯಾಲಯದ ಆದೇಶಗಳನ್ನು ಜಾರಿಗೊಳಿಸುವಿಕೆ ಅಥವಾ ಅನುಪಾಲನೆಯನ್ನು ಮೇಲ್ವಿಚಾರಣೆ ನಡೆಸಲು ಗೊತ್ತುಪಡಿಸಿದ ಅಧಿಕಾರಿಯನ್ನಾಗಿ ಒಬ್ಬ ಅಧಿಕಾರಿಯನ್ನು ನೇಮಿಸುವುದು; ಮತ್ತು

(iii) ನ್ಯಾಯಾಲಯದ ಆದೇಶದ ಅನನುಪಾಲನೆಗಾಗಿ ಕಾರ್ಯವಿಧಾನವನ್ನು ನಿರ್ದಿಷ್ಟಪಡಿಸುವುದು;

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಎಚ್.ಕೆ.ಪಾಟೀಲ**
ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು
ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ
ಹಾಗೂ ಪ್ರವಾಸೋದ್ಯಮ ಮಂತ್ರಿಗಳು

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 16ನೇ ಆಗಸ್ಟ್ 2025